ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಬೆಂಗಳೂರು ನಗರದಲ್ಲಿ ವೈಟ್‌ಟ್ಯಾಪಿಂಗ್ ರಸ್ತೆ ಕಾಮಗಾರಿಯ ಕುರಿತು

ಶ್ರೀಹೆಚ್.ಎಂ.ರಮೇಶ್‌ಗೌಡ(ವಿಧಾನಸಭೆಯಿಂದಚುನಾಯಿತರಾದವರು):-

773 (994) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದಲ್ಲಿ ವೈಟ್‌ಟ್ಯಾಪಿಂಗ್ ರಸ್ತೆ ಕಾಮಗಾರಿಯು ಕ್ಷಿಪ್ರಗತಿಯಲ್ಲಿ ನಡೆಯದೆ ಸಾರ್ವಜನಿಕರಿಗೆ ಧೂಳಿನ ಸಮಸ್ಯೆ ಸಂಚಾರ ದಟ್ಟಣೆ ರೀತಿಯ ಕಿರಿಕಿರಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಒಂದು ಕ್ಷೇತ್ರದ ವೈಟ್‌ಟ್ಯಾಪಿಂಗ್ ಕಾಮಗಾರಿಯ ಕಾಲಮಿತಿ ಎಷ್ಟು ವೈಟ್‌ಟ್ಯಾಪಿಂಗ್ ಕಾಮಗಾರಿ ವಿಳಂಬ ಧೋರಣೆಯನ್ನು ತೊಡೆದು ಹಾಕುವಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ;

(ಇ) ಬೆಂಗಳೂರು ನಗರದ ಬಹಳಷ್ಟು ಕಡೆ ರಸ್ತೆಗಳು ಸರಿಯಾದ ಗುಣಮಟ್ಟದಿಂದ ಕೂಡಿರದೆ ಬಹಳಷ್ಟು ವರ್ಷಗಳಿಂದ ರಸ್ತೆಗಳು ದುರಸ್ತಿ ಆಗದೇ ಹಾಗೇ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಬೆಂಗಳೂರಿನ ಎಲ್ಲಾ ಕ್ಷೇತ್ರಗಳಲ್ಲಿ ರಸ್ತೆಗಳು ಉನ್ನತ ಗುಣಮಟ್ಟದಿಂದ ಇರುವಂತೆ ಸರ್ಕಾರವು ಕೈಗೊಂಡ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ರಸ್ತೆಗಳನ್ನು ಸರಿಪಡಿಸಲಾಗುವುದು?